Commencement letter

ದೂರವಾಣಿ : 080-27835122
ಫ್ಯಾಕ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

''ಅಣ್ಣ'', ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು - 560 099.
URL : www.anekal-pa.in

## ಪ್ರಾರಂಭಿಕ ಪ್ರಮಾಣ ಪತ್ರ

ಸಂಖ್ಯೆ: ಆಯೋಪ್ರಾ/ಎಲ್ಎಟ/91/2010-11

ದಿನಾಂಕ: 08-09-2011

ಶ್ರೀ ರಾಜ್‌ಕುಮಾರ್, ಶ್ರೀ ಪಿ.ಕೆ. ಚಂದ್ರಶೇಖರ್ ಮತ್ತು ಶ್ರೀ ಬಾಬುರೆಡ್ಡಿ ಇವರುಗಳ ಪರವಾಗಿ ಜಿಪಿಎ ದಾರರಾದ M/s "Faith ECOSPACE" GPA ದಾರರು, ಇವರು ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಅಡಿಗಾರಕಲ್ಲಹಳ್ಳಿ ಗ್ರಾಮದ ಸ.ನಂ.131ರಲ್ಲಿನ 02ಎಕರೆ ಜಮೀನಿನ ಖಾತೆ ಸಂಖ್ಯೆ:437ರಲ್ಲಿ ಪ್ರಾಧಿಕಾರದಿಂದ ದಿನಾಂಕ:20.06.2011ರಂದು ಅನುಮೋದಿಸಿದ ಒಂಟಿ ನಿವೇಶನ ನಕ್ಷೆಯಲ್ಲಿ ಸ್ಟಿಲ್ಟ್+ನೆಲ+ ಮೊದಲನೇ+ಎರಡನೇ+ಮೂರನೇ ಮಹಡಿಯಲ್ಲಿ ಒಟ್ಟು 180 ಘಟಕಗಳ ವಸತಿ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಅನುಮೋದನಾ ಶುಲ್ಕ ರೂ. 75,000 ಡಿಡಿ ನಂ. 008437 ಹಾಗೂ ಭದ್ರತಾ ಠೇವಣಿ ಶುಲ್ಕ ರೂ.7,47,000/- ಡಿಡಿ ನಂ.008438 ದಿನಾಂಕ:25.08.2011 ಹಾಗೂ ರೂ.21,000/- ಡಿಡಿ ನಂ.008682 ರೂ. 2,10,000/- ಡಿಡಿ ನಂ. 008681 ದಿನಾಂಕ:7.09.2011ರಂದು ಪಾವತಿಸಲಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(1)ರನ್ವಯ ಈ ಕೆಳಕಂಡ ಷರತ್ತುಗೊಳಪಡಿಸಿ ಪ್ರಾರಂಭಿಕ ಪ್ರಮಾಣ ಪತ್ರ ನೀಡಿದೆ.

### ಷರತ್ತುಗಳು

1) ಮೇಲ್ಕಂಡ ನಿವೇಶನದಲ್ಲಿ ಕಟ್ಟುವ ಕಟ್ಟಡವನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು, ಮತ್ತು ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ಕಟ್ಟಡ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರಡಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವಾಗಿರುತ್ತದೆ.
3). ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.
4) ಕಟ್ಟಡ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ, ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
5) ಈ ಪ್ರಾರಂಭಿಕ ಪ್ರಮಾಣ ಪತ್ರವು **ಮಂಜೂರಾದ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ.** ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
6) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ಪಡೆದು ಮುಂದುವರೆಸತಕ್ಕದ್ದು.
7) ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
8) ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆಯಲ್ಲಿ/ಚರಂಡಿ ಮೇಲೆ ಅಥವಾ ಯಾವುದೇ ಸಾರ್ವಜನಿಕ ಪ್ರದೇಶದಲ್ಲಿ ಶೇಖರಣೆ ಮಾಡಬಾರದು,ಈ ಬಗ್ಗೆ ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.
9) ಕಟ್ಟಡ ನಡುಜಾಗ ಪ್ರದೇಶದಲ್ಲಿ ಮರಗಳನ್ನು ಬೆಳೆಸತಕ್ಕದ್ದು.
10) ನಿವೇಶನದ ಆವರಣದೊಳಗೆ ಮಳೆ ನೀರಿನ ಕೊಯ್ಲಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.
11) ಸೋಲಾರ್ ವಾಟರ್ ಹಿಟರ್‌ನ್ನು ಕಟ್ಟಡದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

12) ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ಬದ್ಧರಾಗಿರತಕ್ಕದ್ದು.

13) ಪ್ರಸ್ತಾವಿತ ನಿವೇಶನವು ಯಾವುದೇ ಭೂ ಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಬ್ದಾರಿಯಾಗಿರುವುದಿಲ್ಲ.

14) ಕಟ್ಟಡ ನಿರ್ಮಾಣ ಕಾರ್ಯಪ್ರಾರಂಭಿಸುವ ಮುನ್ನ ಹಂದೇನಹಳ್ಳಿ ಗ್ರಾಮಪಂಚಾಯಿತಿಯಿಂದ ಪರವಾನಗೆಯನ ಪಡೆಯತಕ್ಕದ್ದು.

15) ಯಾವುದೇ ಸಿವಿಲ್ ವ್ಯಾಜ್ಯಗಳಿದ್ದಲ್ಲಿ, ನ್ಯಾಯಾಲಯದ ಆದೇಶಕ್ಕೆ ಬದ್ಧರಾಗಿರುವ, ಸುಳ್ಳು ಮಾಹಿತಿ ಅಥವಾ ಸಲ್ಲಿಸಿರುವ ಯಾವುದೇ ಮಾಹಿತಿ/ದಾಖಲೆಗಳು, ತಪ್ಪಾಗಿದ್ದಲ್ಲಿ/ಪೋರ್ಜರಿ ಆಗಿದ್ದಲ್ಲಿ / ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಕಟ್ಟಡ ನಕ್ಷೆ ಅನುಮೋದನೆಯು ಸ್ವಯಂಚಾಲಿತವಾಗಿ ರದ್ದಾಗುವ ನಿಬಂಧನೆಗೊಳ್ಳಪಟ್ಟಿರುತ್ತದೆ.

16) ಅನುಮೋದಿತ ನಕ್ಷೆಯ ವಿವರಗಳು ಈ ಕೆಳಕಂಡಂತಿದೆ;

| | ನಕ್ಷೆಯಂತೆ | ವಲಯ ನಿಯಮಾವಳಿಯಂತೆ |
|---|---|---|
| ಮುಂಭಾಗ | 5.00 ಮೀ. | 05.0 ಮೀ. |
| ಹಿಂಭಾಗ | 5.102ಮೀ. | 05.0 ಮೀ. |
| ಎಡಭಾಗ | 5.00ಮೀ. | 05.0 ಮೀ. |
| ಬಲಭಾಗ | 5.00ಮೀ. | 05.0 ಮೀ. |
| FAR | 1.86 | 2.00 |
| Parking | 180 No's | 180 No's |

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್15(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

08/09

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ
ನಿರ್ದೇಶಕರು ಹಾಗೂ ಸದಸ್ಯ- ಕಾರ್ಯದರ್ಶಿ,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ಇವರಿಗೆ,

**M/s Faith Ecospace,**
No. 1666, 27th Main,
Near NIFT Campus HSR Layout,
Bangalore-560 102.

<u>ಯಥಾಪ್ರತಿಯನ್ನು</u>: ಕಾರ್ಯದರ್ಶಿಗಳು, ಹಂದೇನಹಳ್ಳಿ ಗ್ರಾಮಪಂಚಾಯಿತಿ, ಆನೇಕಲ್ ತಾಲ್ಲೂಕು, ಇವರಿಗೆ ನಾಲ್ಕು ಕಟ್ಟಡ ನಕ್ಷೆಯ ಪ್ರತಿಗಳೊಂದಿಗೆ ಕಳುಹಿಸಿದೆ.